**ಪ್ರಧಾನ ಹಿರಿಯ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ.ರವರ ನ್ಯಾಯಾಲಯ, ಶ್ರೀರಂಗಪಟ್ಟಣ.**

**ಕ್ರಿಮಿನಲ್ ಮೊಕದ್ದಮೆ ಸಂಖ್ಯೆ : 41/2020**

**ಚಾ.ಸಾ. :- 15**
**ಪ್ರಾ.ಸಾ. :- 07**

| | | |
|---|---|---|
| ಹೆಸರು | : | ವಿನಯ್.ಇ.ವಿ |
| ತಂದೆಯ ಹೆಸರು | : | ವಾಸಪ್ಪ |
| ವಯಸ್ಸು | : | 49 ವರ್ಷ |
| ಉದ್ಯೋಗ | : | ಪಿ.ಐ., ಎಸ್.ಪಿ.ಕಛೇರಿ, ಹಾಸನ |
| ವಾಸಸ್ಥಳ | : | ಹಾಸನ. |

**ಪ್ರಮಾಣೀಕರಿಸಲಾದ ದಿನಾಂಕಃ- 06.04.2026.**

**ಮುಖ್ಯ ವಿಚಾರಣೆ : ಮಾನ್ಯ ಸ.ಸ.ಅ.ರವರಿಂದ :**

ನಾನು 2019 ರ ಅವಧಿಯಲ್ಲಿ ಶ್ರೀರಂಗಪಟ್ಟಣದಲ್ಲಿ ವೃತ್ತ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕಃ 18.06.2019 ರಂದು ನಾನು ಚಾ.ಸಾ-14 ರವರಿಂದ ಕಡತವನ್ನು ಸ್ವೀಕರಿಸಿ ತನಿಖೆ ಮುಂದುವರೆಯಿಸಿರುತ್ತೇನೆ.

ಅಪಘಾತಪಡಿಸಿದ ವಾಹನದ ಮಾಲೀಕರಿಗೆ ಐ.ಎಂ.ವಿ.ಕಾಯ್ದೆಯಡಿ ನೋಟೀಸ್ ನೀಡಿ ಉತ್ತರ ಪಡೆದಿರುತ್ತೇನೆ. ಸದರಿ ನೋಟೀಸ್ ಮತ್ತು ಉತ್ತರವನ್ನು ಈಗ ನೋಡುತ್ತಿದ್ದು, ಅವುಗಳನ್ನು ಈಗಾಗಲೇ ನಿಪಿ-9 ಮತ್ತು 10 ಎಂದು ಗುರುತಿಸಲಾಗಿದೆ. ಆರ್.ಟಿ.ಓ.ಅಧಿಕಾರಿಗಳು ವಾಹನವನ್ನು ಪರಿಶೀಲಿಸಿದ ನಂತರ ವಾಹನವನ್ನು ಬಾಂಡ್ ಪಡೆದು ಬಿಡುಗಡೆ ಮಾಡಿರುತ್ತೇನೆ.

ಆರೋಪಿ ಠಾಣೆಗೆ ಹಾಜರಾಗಿದ್ದು, ಅವರಿಗೆ ನೋಟೀಸ್ ಜಾರಿ ಮಾಡಿ ಬಾಂಡ್ ಪಡೆದು ಜಾಮೀನಿನ ಮೇಲೆ ಅವರನ್ನು ಬಿಡುಗಡೆ ಮಾಡಿರುತ್ತೇನೆ.

ತನಿಖಾ ಸಮಯದಲ್ಲಿ ಸಾಕ್ಷಿದಾರರಾದ ಚಾ.ಸಾ-2 ರವರ ಹೇಳಿಕೆ ದಾಖಲು ಮಾಡಿಕೊಂಡಿರುತ್ತೇನೆ.

ನಂತರ, ಪ್ರಕರಣದ ಕಡತವನ್ನು ಪ್ರಕರಣದ ದಿನಚರಿಯೊಂದಿಗೆ ಚಾಸಾ-16 ರವರು ಪಡೆದುಕೊಂಡಿರುತ್ತಾರೆ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ :</u>**

ಚಾ.ಸಾ-2 ರವರು ನಿಪಿ-7 ರಂತೆ ಹೇಳಿಕೆ ಕೊಟ್ಟಿಲ್ಲ ಎಂದರೆ ಸುಳ್ಳು. ಸಾಕ್ಷಿದಾರರ ಹೇಳಿಕೆಗಳನ್ನು ಪ್ರಕರಣಕ್ಕೆ ಅನುಕೂಲವಾಗುವಂತೆ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ವಾಹನದ ಫೋಟೋಗಳನ್ನು ಪ್ರಕರಣಕ್ಕೆ ಅನುಕೂಲವಾಗುವಂತೆ ಸೃಷ್ಟಿಸಿರುತ್ತೇನೆ ಎಂದರೆ ಸರಿಯಲ್ಲ. ತನಿಖಾ ಸಮಯದಲ್ಲಿ ಆರೋಪಿಯ ತಪ್ಪು ಇರುವುದಿಲ್ಲವೆಂದು ಕಂಡು ಬಂದಿರುತ್ತದೆ ಎಂದರೆ ಸರಿಯಲ್ಲ. ಆರೋಪಿ ಯಾವುದೇ ತಪ್ಪು ಮಾಡದಿದ್ದರೂ ದೂರುದಾರರ ಕುಟುಂಬಕ್ಕೆ ವಿಮೆ ಪರಿಹಾರ ಕೊಡಿಸುವ ಸಲುವಾಗಿ ಸುಳ್ಳು ದಾಖಲಾತಿ ಸೃಷ್ಟಿಸಿ, ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಮರು ವಿಚಾರಣೆ :-</u> ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಜೆ.ಎಂ.ಎಫ್.ಸಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**